20	ಹಾವೇರಿ	12	9
21	ಉತ್ತರಕನ್ನಡ	14	14
22	ಬೆಳಗಾವಿ	19	29
23	ಭಾಗಲಕೋಟೆ	13	12
24	ಬಿಜಾಪುರ	7	14
25	ಗುಲ್ಬರ್ಗಾ	16	18
26	ಯದಗಿರಿ	5	0
27	ರಾಯಚೂರು	8	5
28	ಕೊಪ್ಪಳ	11	3
29	ಬಳ್ಳಾರಿ	13	8
30	ಬೀದರ್	8	15
ಒಟ್ಟು		362	315

ಕನ್ನಡ ಮಾಧ್ಯಮ ಶಾಲೆಗಳ ಸುಧಾರಣಾ ಕ್ರಮಗಳು

1436(1990); ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ)

ಅ) ರಾಜ್ಯದಲ್ಲಿರುವ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಯಲ್ಲಿ ಉಂಟಾದ ಕುಂಠಿತ ಮತ್ತು ಹೆಚ್ಚಳದ ಕುರಿತಾದ ಜಿಲ್ಲಾವಾರು ಒಟ್ಟು ಸಂಖ್ಯಾ ವಿವರಗಳೇನು; ಯಾವ ಜಿಲ್ಲೆಗಳಲ್ಲಿ ಸೇರ್ಪಡೆ ಕುಂಠಿತಗೊಂಡಿದೆ ಮತ್ತು ಯಾವ ಜಿಲ್ಲೆಗಳಲ್ಲಿ ಹೆಚ್ಚಾಗಿದೆ ಎಂಬ ಕುರಿತು ವಿವರಗಳೇನು;

ಆ) ವಿದ್ಯಾರ್ಥಿಗಳ ಕಡಿಮೆ ಸಂಖ್ಯೆಯಿಂದಾಗಿ ಮುಚ್ಚುವ ಹಂತಕ್ಕೆ ಬಂದ ಒಟ್ಟು ಶಾಲೆಗಳ ಸಂಖ್ಯೆ ಎಷ್ಟು; ಅದಕ್ಕೆ ಕಾರಣಗಳನ್ನು ಗುರುತಿಸಿ ಸರ್ಕಾರ ಕೈಗೊಂಡಿರುವ ಸುಧಾರಣಾ ಕ್ರಮಗಳೇನು;

ಇ) ಖಾಸಗಿ ಶಾಲೆಗಳವರೊಂದಿಗೆ ಪೈಪೋಟಿ ಎದುರಿಸಲು ಮೂಲ ಸೌಕರ್ಯಗಳು ಮತ್ತು ಗುಣಮಟ್ಟದ ಶಿಕ್ಷಣ ಹಾಗೂ ಆಂಗ್ಲ ಭಾಷಾಜ್ಞಾನ, ಸೌಲಭ್ಯ ಮುಂತಾದವುಗಳನ್ನು ವ್ಯವಸ್ಥೆಗೊಳಿಸುವಲ್ಲಿ ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳಾವುವು?

ಶ್ರೀ ಕಿಮ್ಮನೆ ರತ್ನಾಕರ್ (ಪ್ರಾಥಮಿಕ & ಪ್ರೌಢ ಶಿಕ್ಷಣ ರತ್ನಾಕರ್)

ಅ) ಸರ್ಕಾರಿ ಕನ್ನಡ ಮಾಧ್ಯಮದ ಶಾಲೆಗಳ ವಿವರ:

2011–12 ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ: 40,500.

2012–13 ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ: 39,898

2013–14 ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ : 39,765.

2011–12 ರಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ: 4,220.

2012–13 ರಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ: 4,223.

2013–14 ರಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ: 4,253.

ಸರ್ಕಾರಿ ಕನ್ನಡ ಮಾಧ್ಯಮದಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ವಿವರ:

2011–12 ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ:39,37,403.

2012–13 ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ:38,71,985.

2013–14 ರಲ್ಲಿ ಸರ್ಕಾರಿ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಶಾಲೆಗಳ ಸಂಖ್ಯೆ: 37,57,061.

2011–12 ರಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ:8,95,892.

2012–13 ರಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ:8,08,250.

2013–14 ರಲ್ಲಿ ಸರ್ಕಾರಿ ಪ್ರವಢ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ:7,99,824.

(ಜಿಲ್ಲಾವಾರು ವಿವರಗಳ ಪಟ್ಟಿಯನ್ನು ಲಗತ್ತಿಸಿದೆ)

ಆ) ದಿನಾಂಕ:22/09/2011 ರಂದು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಮಕ್ಕಳ ಸಂಖ್ಯೆ 05 ಕ್ಕಿಂತ ಕಡಿಮೆ ಇರುವ ಶಾಲೆಗಳನ್ನು ಹತ್ತಿರದ ಶಾಲೆಗಳಿಗೆ, ಇರುವ ಸೌಲಭ್ಯಗಳ ಸಮರ್ಪಕ ಬಳಕೆ ಹಾಗೂ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಕ್ರಿಯಾಶೀಲವಾಗಿರಬೇಕೆಂಬ ಆಧಾರದ ಮೇಲೆ ವಿಲೀನಗೊಳಿಸಲಾಗಿದೆ.

2011–12 ನೇ ಸಾಲಿನಲ್ಲಿ ರಾಜ್ಯದ 539 ಶಾಲೆಗಳನ್ನು ವಿಲೀನಗೊಳಿಸಲಾಗಿದೆ. ನಂತರದ ವರ್ಷಗಳಲ್ಲಿ ಯಾವುದೇ ಶಾಲೆಗಳನ್ನು ಮುಚ್ಚಿರುವುದಿಲ್ಲಹಾಗೂ ಶಾಲೆಗಳನ್ನು ಮುಚ್ಚುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇ) ಸರ್ಕಾರಿ ಶಾಲೆಗಳ ಗುಣಮಟ್ಟ ವೃದ್ಧಿಪಡಿಸಲು ಸರ್ಕಾರವು ಅಕ್ಷರ ದಾಸೋಹ, ನಲಿಕಲಿ, ಉಚಿತ ಸಮವಸ್ತ್ರ, 8ನೇ ತರಗತಿ ಮಕ್ಕಳಿಗೆ ಬೈಸಿಕಲ್ ವಿತರಣೆ, ಉಚಿತ ಪಠ್ಯಪುಸ್ತಕ ವಿತರಣೆ, 1ನೇ ತರಗತಿಯಿಂದಲೇ ಇಂಗ್ಲಿಷ್ ಭಾಷೆ ಬೋಧನೆ, ಶಿಕ್ಷಕರಿಗೆ ಇಂಗ್ಲಿಷ್ ಭಾಷಾ ಬೋಧನೆಯ ಬಗ್ಗೆ ತರಬೇತಿ, ವಿಷಯ ಸಂಪದೀಕರಣ ತರಬೇತಿ ನಡೆಸಲಾಗುತ್ತಿದೆ. ಪ್ರತಿಭಾ ಕಾರಂಜಿ, ಕ್ಷೀರ ಭಾಗ್ಯ, ಹೆಣ್ಣುಮಕ್ಕಳ ಹಾಜರಾತಿಗೆ ₹ 2/– ರ ಪ್ರೋತ್ಸಾಹ ಧನ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.